**All India Radio: Bangalore**
**Regional Bulletin In Kannada**
**14.08.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**14.08.2025 / 6.40 p.m.**
**<><><><>**

ಮುಖ್ಯಾಂಶಗಳು

1. ವೈದ್ಯಕೀಯ ಚಿಕಿತ್ಸೆಗೆ ಅಗತ್ಯವಿರುವ ಪಡಿತರಚೀಟಿ ೨೪ ಗಂಟೆಯೊಳಗೆ ನೀಡಲು ಸರ್ಕಾರದಿಂದ ಪ್ರತ್ಯೇಕ ಪೋರ್ಟಲ್
2. ಧರ್ಮಸ್ಥಳದಲ್ಲಿ ಎಸ್ಐಟಿ ಉತ್ಖನನ ಕಾರ್ಯ ಶೀಘ್ರದಲ್ಲೇ ಮುಕ್ತಾಯ; ವಿಧಾನಸಭೆಯಲ್ಲಿ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸ್ಪಷ್ಟನೆ
3. ದೇಶಾದ್ಯಂತ ನಾಳೆ ೭೯ನೇ ಸ್ವಾತಂತ್ರ್ಯ ದಿನಾಚರಣೆ; ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಧ್ವಜಾರೋಹಣ
4. ರಾಜ್ಯದ ೧೯ ಮಂದಿ ಪೊಲೀಸ್ ಅಧಿಕಾರಿಗಳಿಗೆ ರಾಷ್ಟ್ರಪತಿ ಸೇವಾ ಪದಕ
5. ಸುಪ್ರೀಂಕೋರ್ಟ್ ಜಾಮೀನು ರದ್ದುಗೊಳಿಸಿದ ಹಿನ್ನೆಲೆ; ನಟ ದರ್ಶನ್ ಬಂಧನ
6. ಮಡಿಕೇರಿಯ ರಾಜಾಸೀಟ್‌ನಲ್ಲಿ ಉದ್ದೇಶಿತ ಗ್ಲಾಸ್ ಬ್ರಿಡ್ಜ್ ಯೋಜನೆ ಸ್ಥಗಿತ

<><><><>

ವೈದ್ಯಕೀಯ ಚಿಕಿತ್ಸೆಗೆ ಅಗತ್ಯವಿರುವ ಪಡಿತರ ಚೀಟಿಯನ್ನು ೨೪ ಗಂಟೆಯ ಒಳಗಾಗಿ ನೀಡಲು ಪ್ರತ್ಯೇಕವಾದ ಪೋರ್ಟಲ್ ಆರಂಭಿಸಲಾಗುತ್ತಿದೆ ಎಂದು ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಕೆ.ಎಚ್.ಮುನಿಯಪ್ಪ ವಿಧಾನಸಭೆಯಲ್ಲಿಂದು ತಿಳಿಸಿದ್ದಾರೆ. ಮಂಗಳೂರು ಉತ್ತರ ಕ್ಷೇತ್ರದ ಡಾ. ವೈ.ಭರತ್ ಶೆಟ್ಟಿ ಪ್ರಶ್ನೆಗೆ ಉತ್ತರಿಸಿದ ಅವರು ಬಿಪಿಎಲ್ ಕಾರ್ಡುಗಳ ಪೈಕಿ ೧೩ ಲಕ್ಷ ಅನರ್ಹ ಫಲಾನುಭವಿಗಳಿದ್ದಾರೆ. ಅನರ್ಹರ ಪರಿಷ್ಕರಣೆಯ ಬಳಿಕ ಮುಂದಿನ ತಿಂಗಳು ಹೊಸ ಬಿಪಿಎಲ್ ಕಾರ್ಡ್ ನೀಡಲು ಆರಂಭಿಸಲಾಗುವುದು. ಎಪಿಎಲ್ ಕಾರ್ಡ್ ದಾರಲ್ಲಿ ಅಕ್ಕಿ ಖರೀದಿಸುವವರ ಸಂಖ್ಯೆ ಕಡಿಮೆ ಇರುವುದರಿಂದ ಅಕ್ಕಿ ಮಾರಾಟವನ್ನು ಸ್ಥಗಿತಗೊಳಿಸಲಾಗಿದೆ ಎಂದು ಸದನಕ್ಕೆ ಮಾಹಿತಿ ನೀಡಿದ್ದಾರೆ.

<><><><>

ಧರ್ಮಸ್ಥಳದಲ್ಲಿ ಎಸ್ಐಟಿ ನಡೆಸುತ್ತಿರುವ ಉತ್ಖನನ ಕಾರ್ಯ ಶೀಘ್ರದಲ್ಲೇ ಮುಕ್ತಾಯಗೊಳ್ಳಲಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ವಿಧಾನಸಭೆಯಲ್ಲಿಂದು ತಿಳಿಸಿದ್ದಾರೆ. ಗೃಹ ಸಚಿವನಾಗಿ ಯಾರ ಒತ್ತಡಕ್ಕೂ ಮಣಿದಿಲ್ಲ ಎಂದು ಹೇಳಿದ್ದಾರೆ. ಸುಳ್ಳು ಆರೋಪಗಳನ್ನು ಮಾಡುವ ದೂರುದಾರರನ್ನು ಶಿಕ್ಷಿಸಲು ಭಾರತೀಯ ನ್ಯಾಯಸಂಹಿತೆಯಲ್ಲಿ ಅವಕಾಶವಿದೆ ಎಂದು ಪ್ರತಿಪಾದಿಸಿದ್ದಾರೆ. ಇದಕ್ಕೂ ಮೊದಲು, ಧರ್ಮಸ್ಥಳದ ಹೆಸರು ಹಾಳು ಮಾಡಲು ರಾಜ್ಯ ಸರ್ಕಾರ ವಿಭಜನಕಾರಿ ಶಕ್ತಿಗಳೊಂದಿಗೆ ಕೈಜೋಡಿಸಿದೆ ಎಂದು ವಿಧಾನಸಭೆಯಲ್ಲಿ ಶಾಸಕ ವಿ.

ಸುನಿಲ್ ಕುಮಾರ್ ಆರೋಪಿಸಿದರು. ನಿಯಮ ೬೯ರ ಅಡಿಯಲ್ಲಿ ವಿಷಯ ಪ್ರಸ್ತಾಪಿಸಿದ ಅವರು, ಎಸ್‌ಡಿಪಿಐಗೂ ಧರ್ಮಸ್ಥಳಕ್ಕೂ ಏನು ಸಂಬಂಧ ಎಂದು ಪ್ರಶ್ನಿಸಿದರು. ಕಳೆದ ಕೆಲವು ತಿಂಗಳಿನಿಂದ ಧರ್ಮಸ್ಥಳದ ವಿರುದ್ಧ ವ್ಯವಸ್ಥಿತ ಪಿತೂರಿ ನಡೆಯುತ್ತಿದೆ. ಧಾರ್ಮಿಕ ಭಾವನೆಗಳಿಗೆ ನೋವುಂಟು ಮಾಡಲು ಪ್ರಯತ್ನಗಳು ನಡೆಯುತ್ತಿವೆ ಎಂದು ಸರ್ಕಾರದ ಗಮನ ಸೆಳೆದರು. ಈ ವೇಳೆ ಮಧ್ಯಪ್ರವೇಶಿಸಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಧರ್ಮಸ್ಥಳದ ವಿರುದ್ಧ ದೊಡ್ಡ ಷಡ್ಯಂತರ ನಡೆದಿದೆ ಎಂದು ಹೇಳಿದರು. ಕ್ಷೇತ್ರದ ಪರಂಪರೆ, ದೇವಸ್ಥಾನ, ಧರ್ಮ, ಧಾರ್ಮಿಕ ಸೇವೆ ಬಗ್ಗೆ ಬಿಜೆಪಿಗಿಂತ ಹೆಚ್ಚಿನ ಕಾಳಜಿ, ನಂಬಿಕೆ ತಮಗಿದ್ದು, ಈ ವಿಚಾರವನ್ನು ರಾಜಕೀಯ ಮಾಡುವುದು ಬೇಡ ಎಂದು ತಿಳಿಸಿದರು. ಈ ವಿಚಾರದಲ್ಲಿ ಕಾಂಗ್ರೆಸ್ ಪಕ್ಷ ಹಾಗು ಹೈಕಮಾಂಡ್‌ನ್ನು ಎಳೆದು ತರಬೇಡಿ ಎಂದು ಹೇಳಿದರು.

<><><><>

ಬೆಂಗಳೂರಿನ ಸಂಚಾರ ದಟ್ಟಣೆ ಕಡಿಮೆ ಮಾಡುವ ಉದ್ದೇಶದಿಂದ ಸುರಂಗ ರಸ್ತೆ ನಿರ್ಮಾಣ ಯೋಜನೆ ಕೈಗೆತ್ತಿಕೊಳ್ಳಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮೇಲ್ಮನೆಯಲ್ಲಿ ತಿಳಿಸಿದ್ದಾರೆ. ಬಿಜೆಪಿ ಸದಸ್ಯ ಸಿ.ಟಿ. ರವಿ ಪ್ರಶ್ನೆಗೆ ಉತ್ತರಿಸಿದ ಅವರು ಬೆಂಗಳೂರು ನಗರದಲ್ಲಿ ಭೂಗತ ಸುರಂಗ ರಸ್ತೆ ನಿರ್ಮಾಣಕ್ಕೆ ಸಚಿವ ಸಂಪುಟ ಅನುಮೋದನೆ ನೀಡಿದೆಯೇ ? ವಿಸ್ತೃತ ಯೋಜನಾ ವರದಿ-ಡಿಪಿಆರ್ ಸಿದ್ಧಪಡಿಸಲು ಯಾವ ಕಂಪನಿಗೆ ನೀಡಲಾಗಿದೆ ಎಂಬುದನ್ನು ತಿಳಿಯ ಬಯಸಿದರು. ಇದಕ್ಕೆ ಉತ್ತರಿಸಿದ ಡಿ.ಕೆ.ಶಿವಕುಮಾರ್ ಈ ಯೋಜನೆಯಲ್ಲಿ ಯಾವುದೇ ರೀತಿಯ ಭ್ರಷ್ಟಾಚಾರ ನಡೆದಿದೆ ಎಂಬ ಸಂಶಯ ಬಂದಲ್ಲಿ ಯಾವುದೇ ರೀತಿಯ ತನಿಖೆ ಎದುರಿಸಲು ತಾವು ಸಿದ್ಧ ಎಂದು ಹೇಳಿದ್ದಾರೆ.

<><><><>

ನಾಳೆ ದೇಶಾದ್ಯಂತ ೭೯ನೇ ಸ್ವಾತಂತ್ರ್ಯ ದಿನಾಚರಣೆ ಆಚರಿಸಲಾಗುತ್ತಿದೆ. ಬೆಂಗಳೂರಿನಲ್ಲೂ ಮಾಣೆಕ್ ಷಾ ಪರೇಡ್ ಮೈದಾನದಲ್ಲಿ ನಡೆಯಲಿರುವ ರಾಜ್ಯಮಟ್ಟದ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಧ್ವಜಾರೋಹಣ ನೆರವೇರಿಸಿ, ಗೌರವ ವಂದನೆ ಸ್ವೀಕರಿಸಲಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ರಾಜಧಾನಿ ಬೆಂಗಳೂರಿನಲ್ಲಿ ಬಿಗಿ ಭದ್ರತೆ ಏರ್ಪಡಿಸಲಾಗಿದೆ. ೭೯ನೇ ಸ್ವಾತಂತ್ರ್ಯ ದಿನಾಚರಣೆಗೆ ದಾವಣಗೆರೆ ಜಿಲ್ಲಾಡಳಿತ ಅಗತ್ಯ ಸಿದ್ಧತೆಗಳನ್ನು ಮಾಡಿಕೊಂಡಿದೆ ಎಂದು ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಂಡಿರುವ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಧ್ವಜಾರೋಹಣ ನೆರವೇರಿಸಲಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತದಿಂದಲೂ ಸ್ವಾತಂತ್ರ್ಯ ದಿನಚರಣೆ ಕಾರ್ಯಕ್ರಮಕ್ಕೆ ಸಕಲ ಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿದ್ದು, ನಾಳೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್ ಮುನಿಯಪ್ಪ ಧ್ವಜಾರೋಹಣ ನೆರವೇರಿಸಲಿದ್ದಾರೆ.

<><><><>

೨೦೨೫ರ ಸ್ವಾತಂತ್ರ್ಯ ದಿನಾಚರಣೆಯ ಸಂದರ್ಭದಲ್ಲಿ ರಾಜ್ಯದ ೧೯ ಮಂದಿ ರಾಷ್ಟ್ರಪತಿ ಅವರ ವಿಶಿಷ್ಟ ಸೇವಾ ಪದಕ ಮತ್ತು ಶ್ಲಾಘನೀಯ ಸೇವಾ ಪದಕಕ್ಕೆ ಭಾಜನರಾಗಿದ್ದಾರೆ. ಎಸ್. ಬದರಿನಾಥ್ ವಿಶಿಷ್ಟ ಸೇವಾ ಪದಕಕ್ಕೆ

ಹಾಗೂ ಡಾ. ಚಂದ್ರಗುಪ್ತಾ, ಕೆ.ಎಂ. ಶಾಂತರಾಜು, ಕಲಾ ಕೃಷ್ಣಸ್ವಾಮಿ, ರಾಮಕೃಷ್ಣ ಮುದ್ದೇಪಾಲ, ವೆಂಕಟೇಶ್, ಪ್ರಕಾಶ್ ರಾಥೋಡ್, ಪ್ರವೀಣ್ ಬಾಬು, ಬಿ.ಎಸ್. ಸತೀಶ್, ಶಾಂತಾರಾಂ, ಎಡ್ವಿನ್ ಪ್ರದೀಪ್, ಸುಜನ ಶೆಟ್ಟಿ, ಝಾನ್ಸಿರಾಣಿ ಸೇರಿದಂತೆ ಒಟ್ಟು ೧೯ ಮಂದಿ ರಾಷ್ಟ್ರಪತಿಗಳ ಸೇವಾ ಪದಕಕ್ಕೆ ಆಯ್ಕೆಯಾಗಿದ್ದಾರೆ.

<><><>

ಸುಪ್ರೀಂಕೋರ್ಟ್ ಜಾಮೀನು ರದ್ದುಗೊಳಿಸಿದ ಹಿನ್ನೆಲೆಯಲ್ಲಿ ನಟ ದರ್ಶನ್ ಅವರನ್ನು ಬೆಂಗಳೂರಿನ ಹೊಸಕೆರೆಹಳ್ಳಿಯಲ್ಲಿಂದು ಅನ್ನಪೂರ್ಣೇಶ್ವರಿನಗರ ಪೊಲೀಸರು ಬಂಧಿಸಿದ್ದಾರೆ. ಮಧ್ಯಾಹ್ನ ಎ-೧ ಆರೋಪಿ ಪವಿತ್ರಾ ಗೌಡ ಬಂಧನವಾಗಿತ್ತು. ಆರೋಪಿಗಳನ್ನು ಇಂದು ಪೊಲೀಸರು ನ್ಯಾಯಾಲಯದ ಮುಂದೆ ಹಾಜರುಪಡಿಸಲಿದ್ದಾರೆ. ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ಸರ್ವೋಚ್ಚ ನ್ಯಾಯಾಲಯ ನಟ ದರ್ಶನ್ ಸೇರಿದಂತೆ ಇತರೆ ೭ ಮಂದಿ ಆರೋಪಿಗಳ ಜಾಮೀನು ರದ್ದುಗೊಳಿಸಿ ತೀರ್ಪು ನೀಡಿತ್ತು. ದರ್ಶನ್‌ಗೆ ಜೈಲಿನಲ್ಲಿ ರಾಜಾತಿಥ್ಯ ನೀಡದಂತೆ ಜೈಲಾಧಿಕಾರಿಗಳಿಗೆ ನ್ಯಾಯಾಲಯ ನಿರ್ದೇಶನ ನೀಡಿದೆ.

<><><>

ಮಡಿಕೇರಿಯ ರಾಜಾಸೀಟ್‌ನಲ್ಲಿ ಉದ್ದೇಶಿತ ಗ್ಲಾಸ್ ಬ್ರಿಡ್ಜ್ ಯೋಜನೆಯನ್ನು ಸ್ಥಗಿತಗೊಳಿಸಿರುವುದಾಗಿ ಶಾಸಕ ಡಾ.ಮಂಥರ್ ಗೌಡ ಸ್ಪಷ್ಟಪಡಿಸಿದ್ದಾರೆ. ರಾಜಾಸೀಟ್‌ನ ಮುಂದುವರೆದ ಜಾಗವಾದ ಗ್ರೇಟರ್ ರಾಜಾಸೀಟ್‌ನಲ್ಲಿ ತೋಟಗಾರಿಕಾ ಇಲಾಖೆಯಿಂದ ೧೫ ಕೋಟಿ ರುಪಾಯಿ ವೆಚ್ಚದಲ್ಲಿ ಗ್ಲಾಸ್ ಬ್ರಿಡ್ಜ್ ಮತ್ತು ಫುಡ್ ಕೋರ್ಟ್ ಯೋಜನೆಗೆ ಸರ್ಕಾರ ಮುಂದಾಗಿತ್ತು. ಆದರೆ ಪರಿಸರಕ್ಕೆ ಹಾನಿ ಮತ್ತು ಭೂಕುಸಿತದ ಅಪಾಯದ ಹಿನ್ನಲೆಯಲ್ಲಿ ಈ ಯೋಜನೆಗೆ ವ್ಯಾಪಕ ವಿರೋಧ ವ್ಯಕ್ತವಾಗಿತ್ತು. ಹಿರಿಯ ರಾಜಕಾರಣಿ ಎಂ.ಸಿ. ನಾಣಯ್ಯ ಕೂಡ ಗ್ಲಾಸ್ ಬ್ರಿಡ್ಜ್ ಯೋಜನೆ ವಿರೋಧಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಮಾಡಿದ್ದರು. ಇದೀಗ ಮುಖ್ಯಮಂತ್ರಿ ಸೂಚನೆಯಂತೆ ಪರಿಸರಕ್ಕೆ ಧಕ್ಕೆಯಾಗುವ ಗ್ಲಾಸ್ ಬ್ರಿಡ್ಜ್ ಯೋಜನೆಯನ್ನು ಸರ್ಕಾರ ಕೈಬಿಟ್ಟಿದೆ ಎಂದು ಮಂಥರ್ ಗೌಡ ಹೇಳಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>